ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

ಆಗು ನೀ ಅನಿಕೇತನ
BE BOUNDLESS

BENGALURU
CITY UNIVERSITY

Office of the Registrar (Evaluation), Central College Campus, Dr.AmbedkarVeedhi,
Bengaluru – 560 001. E-mail: registrarevlubcu@gmail.com, Ph.No.080-2229555

ಸಂಖ್ಯೆ: ಬೆಂ.ಕೇ.ವಿ/ಪ.ವಿ/ಪರೀಕ್ಷಾ ಮೌಲ್ಯಮಾಪನ/ಯು.ಜಿ/2023-24 ದಿನಾಂಕ: 18.10.2023

# ಸುತ್ತೋಲೆ

**ವಿಷಯ: 2023-24ನೇ ಸಾಲಿನ ಸ್ನಾತಕ ಕೋರ್ಸುಗಳ 2ನೇ ಸೆಮಿಸ್ಟರ್ (ಫ್ರೆಷರ್ಸ್ ಮತ್ತು ರಿಪೀಟರ್ಸ್)ಮತ್ತು 4ನೇ (ಫ್ರೆಷರ್ಸ್)ಸೆಮಿಸ್ಟರ್ ಪರೀಕ್ಷೆಗಳ ಮೌಲ್ಯಮಾಪನಕಾರ್ಯಕ್ಕೆ ಎಲ್ಲಾ ಅರ್ಹ ಅಧ್ಯಾಪಕರನ್ನು (ಅತಿಥಿಉಪನ್ಯಾಸಕರು ಸೇರಿದಂತೆ) ಕಳುಹಿಸಿಕೊಡುವ ಬಗ್ಗೆ.**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ತಮಗೆ ತಿಳಿಸುವುದೇನೆಂದರೆ, ಆಗಸ್ಟ್/ಸೆಪ್ಟೆಂಬರ್/-2023 ರಲ್ಲಿ ನಡೆದಿರುವ ಸ್ನಾತಕ ಕೋರ್ಸುಗಳ 2ನೇ ಸೆಮಿಸ್ಟರ್ (ಫ್ರೆಷರ್ಸ್ ಮತ್ತು ರಿಪೀಟರ್ಸ್) ಮತ್ತು 4ನೇ (ಫ್ರೆಷರ್ಸ್) ಸೆಮಿಸ್ಟರ್ ಪರೀಕ್ಷೆಗಳ ಮೌಲ್ಯಮಾಪನ ಕಾರ್ಯ ನಡೆಯುತ್ತಿದ್ದು, ಶೀಘ್ರವಾಗಿ ಫಲಿತಾಂಶಗಳನ್ನು ಪ್ರಕಟಿಸಬೇಕಿದೆ.

ಮೌಲ್ಯಮಾಪನ ಕಾರ್ಯವು ನಡೆಯುತ್ತಿದ್ದು, ತಾವು ತಪ್ಪದೇ ತಮ್ಮ ಕಾಲೇಜಿನ ಎಲ್ಲಾ ಅರ್ಹ ಅಧ್ಯಾಪಕರನ್ನು(ಅತಿಥಿ ಉಪನ್ಯಾಸಕರು ಸೇರಿದಂತೆ) ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಭಾಗವಹಿಸಲು ನಿರ್ದೇಶನ ನೀಡಬೇಕೆಂದು / ಸೂಚಿಸಬೇಕೆಂದು ಕೋರಲಾಗಿದೆ. **ಸ್ನಾತಕ ಕೋರ್ಸುಗಳ 2ನೇ ಸೆಮಿಸ್ಟರ್ (ಫ್ರೆಷರ್ಸ್ ಮತ್ತು ರಿಪೀಟರ್ಸ್) ಮತ್ತು 4ನೇ (ಫ್ರೆಷರ್ಸ್) ಸೆಮಿಸ್ಟರ್ ಪರೀಕ್ಷೆಗಳು ಪರೀಕ್ಷಾ ವಿಭಾಗ, ನ್ಯಾಚುರಲ್ ಕಟ್ಟಡ (Stone Building), ಸೆಂಟ್ರಲ್ ಕಾಲೇಜ್, ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು ನಡೆಯಲಿದ್ದು, ಆಯಾ ವಿಷಯಗಳ ಮೌಲ್ಯಮಾಪಕರು ತಪ್ಪದೇ ಹಾಜರಾಗಿ ವಿದ್ಯಾರ್ಥಿಗಳ ಮತ್ತು ವಿಶ್ವವಿದ್ಯಾಲಯದ ಹಿತದೃಷ್ಟಿಯಿಂದ ಕಾರ್ಯ ನಿರ್ವಹಿಸಬೇಕೆಂದು ಕೋರಲಾಗಿದೆ.**

**KSU Act 2000 Section 73,74& 75 ಮತ್ತು ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ಪರೀಕ್ಷಾ ಕೈಪಿಡಿ2018ರ ಪ್ರಕಾರ, ಪರೀಕ್ಷೆಯ ಕೆಲಸ ಕಡ್ಡಾಯವಾಗಿದ್ದು, ಎಲ್ಲಾ ಅಧ್ಯಾಪಕರುಗಳನ್ನು ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸಲು ಸೂಚಿಸಬೇಕೆಂದು ಮತ್ತೊಮ್ಮೆ ಕೋರಲಾಗಿದೆ. ಇಲ್ಲವಾದುದಲ್ಲಿ, ಆಯಾ ಕಾಲೇಜಿನ ಅಧ್ಯಾಪಕರುಗಳು ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸದಿದ್ದರೆ, ಅಂತಹ ಕಾಲೇಜುಗಳ ಫಲಿತಾಂಶವನ್ನು ತಡೆಹಿಡಿಯಲಾಗುತ್ತದೆ.**

ಆದುದರಿಂದ, ದಯಮಾಡಿ ಎಲ್ಲಾ ಪ್ರಾಂಶುಪಾಲರುಗಳು ಈ ವಿಚಾರವನ್ನು ಗಮನದಲ್ಲಿಟ್ಟುಕೊಂಡು ಸಕ್ರಿಯ ಸಹಕಾರ ನೀಡಬೇಕೆಂದು ಕೋರಿದೆ.

**ಕುಲಸಚಿವರು(ಮೌಲ್ಯಮಾಪನ)**

ಕುಲಸಚಿವರು (ಮೌಲ್ಯಮಾಪನ)
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಕ್ಯಾಂಪಸ್
ಬೆಂಗಳೂರು -560 001

ಗೆ,

ಬೆಂಗಳೂರು ನಗರ ವಿಶ್ವವಿದ್ಯಾಲಯದ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು, ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು.

ಪ್ರತಿಗಳು:

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ವಿಧಾನ ವೀಧಿ, ಮಹಾರಾಣಿಕಾಲೇಜುಎದುರು, ಬೆಂಗಳೂರು – 560001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು – 560001.
3. ವೆಬ್‌ಸೈಟ್ ನಿವಾಹಕರು, ಮೇಲೆ ಹೇಳಿರುವ ಸುತ್ತೋಲೆಯನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಹಾಗೂ ಕಾಲೇಜ್ ಪೋರ್ಟ್ರಲ್‌ನಲ್ಲಿಅಪ್ಲೋಡ್ ಮಾಡಲುಕೋರಲಾಗಿದೆ.